# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2ರ ಕಾರ್ಯದರ್ಶಿ ಹಾಗೂ ಕಛೇರಿ ಉಪಯೋಗಕ್ಕಾಗಿ 02 ವಾಹನಗಳನ್ನು ಒದಗಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ-ಆಸು 05 ಅಸಪ 2020, ದಿನಾಂಕ:07.01.2021

2) ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ(ಆಸು) 05 ಆಸಪ 2020, ದಿನಾಂಕ:30.01.2021.

3) ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ(ಆಸು) 05 ಆಸಪ 2020, ದಿನಾಂಕ:04.02.2021.

4) ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ರ ಕಡತ ಸಂಖ್ಯೆ. KARC-2/1/10/2021-O/O CHAIRMAN-KARNATAKA ADMINISTRATIVE REFORMS COMMISSION.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ. (1)ರ ಆದೇಶದಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಆಡಳಿತ ಮತ್ತು ಆಡಳಿತ ವ್ಯವಸ್ಥೆಗಳನ್ನು ಮತ್ತೊಮ್ಮೆ ಸಮಗ್ರವಾಗಿ ಮೌಲ್ಯಮಾಪನ ಮಾಡುವ ಹಾಗೂ ಸೂಕ್ತವಾದ ಹೊಸ ಆಡಳಿತ ಮತ್ತು ಆಡಳಿತ ವ್ಯವಸ್ಥೆಯನ್ನು ರಚಿಸಲು ಹೊಸ ಬದಲಾವಣೆಗಳನ್ನು ಮತ್ತು ಪರಿವರ್ತನೆಗಳನ್ನು ಶಿಫಾರಸ್ಸು ಮಾಡಲು ಆಯೋಗ-2ನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ. (2)ರ ಆದೇಶದಲ್ಲಿ ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2ಗೆ ಸಲಹೆಗಾರರ ಹುದ್ದೆ ಸೃಜಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ. (3)ರ ಆದೇಶದಲ್ಲಿ ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ಕ್ಕೆ ಪೂರಕವಾಗಿ 14 ಹುದ್ದೆಗಳನ್ನು ಸೃಜಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ. (4)ರ ಕಡತದಲ್ಲಿ ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2ಕ್ಕೆ ಸಲಹೆಗಾರರನ್ನಾಗಿ ನೇಮಿಸಿರುವ ಶ್ರೀ ಎನ್.ಎಸ್.ಪ್ರಸನ್ನ ಕುಮಾರ್, ಭಾ.ಆ.ಸೇ., (ನಿವೃತ್ತ) ಇವರಿಗೆ ಕಛೇರಿಯ ಉಪಯೋಗಕ್ಕಾಗಿ ಒಂದು ವಾಹನವನ್ನು ಹಾಗೂ ಆಯೋಗವು ಅನೇಕ ಸಭೆಗಳನ್ನು ನಡೆಸುವುದರಿಂದ ಮತ್ತು ಸರ್ಕಾರಿ ಕಛೇರಿಗಳಿಗೆ ಭೇಟಿ ನೀಡಿ ಮಾಹಿತಿಯನ್ನು ದಿನನಿತ್ಯದ ಆಧಾರದ ಮೇಲೆ ಸಂಗ್ರಹಿಸಬೇಕಾಗಿರುವುದರಿಂದ ಆಡಳಿತ ಸುಧಾರಣಾ ಆಯೋಗದ ಕಛೇರಿಗೆ ಎರಡು ವಾಹನಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಒದಗಿಸುವಂತೆ ಅಥವಾ ಲಭ್ಯವಿರುವ ವಾಹನಗಳನ್ನು ಒದಗಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ (ಆಸು) 08 ಆಸಪ 2021, ದಿನಾಂಕ: 30-03-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2ರಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯದರ್ಶಿಯವರ ಉಪಯೋಗಕ್ಕಾಗಿ ಒಂದು ವಾಹನ ಮತ್ತು ಇತರೆ ಸಿಬ್ಬಂದಿಗಳ ಉಪಯೋಗಕ್ಕಾಗಿ ಒಂದು ಸಮೂಹ ವಾಹನ (pooled vehicle) ಸೇರಿದಂತೆ ಒಟ್ಟು ಎರಡು ವಾಹನಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆದೇಶಾನುಸಾರ ಪ್ರತಿ ವಾಹನಕ್ಕೆ ಮಾಸಿಕ ಗರಿಷ್ಠ 30,000/- ರೂಪಾಯಿಗಳ (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಆರ್ಥಿಕ ಮಿತಿಯೊಳಗೆ ಬಾಡಿಗೆ ಆಧಾರದ ಮೇಲೆ ಪಡೆಯಲು ಸರ್ಕಾರದ ಮಂಜೂರಾತಿಯನ್ನು ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆ ಸಂಖ್ಯೆ. ಆಇ 10 ವೆಚ್ಚ-12 / 2021 ದಿನಾಂಕ:24.03.2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

N. S. Gayathri devi 30/3/2021

(ಎನ್.ಎಸ್.ಗಾಯಿತ್ರಿದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ಕಾರ್ಯಾಧ್ಯಯನ)

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ-1 ಮತ್ತು 2) , ಕರ್ನಾಟಕ, ಬೆಂಗಳೂರು.
2. ಅಧ್ಯಕ್ಷರು / ಸಲಹೆಗಾರರು, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಆಡಳಿತ ಸುಧಾರಣೆ) ಹಾಗೂ ಆಯೋಗದ ಕಾರ್ಯದರ್ಶಿ, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ನಿಯಂತ್ರಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
9. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು 560 001.
10. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ರೇಸ್ ಕೋರ್ಸ್ ರಸ್ತೆ, ಬೆಂಗಳೂರು 560 001.
11. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿ.